ಅ) ಮೂಡಿಗೆರೆ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಬರುವ ಕೆರೆಗಳು ಹಾಗೂ ಅಣೆಕಟ್ಟುಗಳ ಸಂಖ್ಯೆ ಎಷ್ಟು?

ಆ) ಈ ಸಾರಿ ಭಾರಿ ಮಳೆಯಿಂದ ಇವುಗಳಿಗೆ ಹಾನಿಯಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಹಾನಿಗೊಂಡಿರುವ ಕೆರೆ, ಅಣೆಕಟ್ಟುಗಳ ದುರಸ್ತಿಗೊಳಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು)

ಅ) ಮೂಡಿಗೆರೆ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ವಲಯದ ವ್ಯಾಪ್ತಿಯಲ್ಲಿ ಯಾವುದೇ ಕೆರೆಗಳು ಇರುವುದಿಲ್ಲ. ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಬರುವ ಅಣೆಕಟ್ಟುಗಳು ಎರಡು. (1) ಕೋವಿ ಪಿಕಪ್ ಚಾನಲ್ (2) ಮುರುಡನಕೆರೆ ಚಾನಲ್.

ಆ) ಯಾವ ಹಾನಿಯೂ ಆಗಿರುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಭಾರಿ ನೀರಾವರಿ ಯೋಜನೆಗಳು

2127 - ಶ್ರೀ ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ) : ಮಾನ್ಯ ಭಾರಿ ಹಾಗೂ ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) 1989 ರಿಂದ 1991 ರವರೆಗೆ ರಾಜ್ಯದಲ್ಲಿ ಹೊಸದಾಗಿ ಮಂಜೂರಾದ ಭಾರಿ ನೀರಾವರಿ ಯೋಜನೆಗಳ ಸಂಖ್ಯೆ ಎಷ್ಟು? (ಅವುಗಳ ಹೆಸರುಗಳನ್ನೊಳಗೊಂಡ ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)?

ಆ) ಪ್ರತಿಯೊಂದು ನೀರಾವರಿ ಯೋಜನೆಗಳಿಗೆ ತಗಲುವ ವೆಚ್ಚ ಎಷ್ಟು?

ಇ) ಇದರ ಜಾರಿಗಾಗಿ ಈಗಾಗಲೇ ಬಿಡುಗಡೆ ಮಾಡಲಾದ ಹಣವೆಷ್ಟು ಹಾಗೂ ಖರ್ಚಾದ ಹಣವೆಷ್ಟು?

ಈ) ಈ ಯೋಜನೆಗಳ ಕಾರ್ಯ ಯಾವ ಹಂತದಲ್ಲಿದೆ ಹಾಗೂ ಇವುಗಳನ್ನು ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)

ಅ) ಯಾವುದೂ ಇಲ್ಲ.

ಇ) ಮೇಲಿನ ಪ್ರಶ್ನೆ (ಅ)ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆಗಳಿಗೆ ಉತ್ತರ ಉದ್ಭವಿಸುವುದಿಲ್ಲ.

ಹಳ್ಳಿ ರಸ್ತೆಗಳ ದುರಸ್ತಿ

2291 - ಶ್ರೀ ಸಿ. ವೀರಭದ್ರಯ್ಯ (ಕೊರಟಗೆರೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ನೆಲಮಂಗಲ ತಾಲ್ಲೂಕು, ತ್ಯಾಮಗೊಂಡ್ಲು ಹೋಬಳಿ ನಿಡವಂದದಿಂದ ಮೂವತ್ತೂರು ಗ್ರಾಮಕ್ಕೆ ಹೋಗುವ ರಸ್ತೆ ತೀರ ಕೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸದರಿ ರಸ್ತೆ ಕೆಲಸವನ್ನು ದುರಸ್ತಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಜಿ.ಹೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಸಚಿವರು)

ಅ) ಈ ರಸ್ತೆಯು ವಾಹನ ಸಂಚಾರಕ್ಕೆ ಯೋಗ್ಯವಾಗಿದೆ.

ಅ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಅಧ್ಯಕ್ಷರು : ಈಗ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ಉತ್ತರಿಸುವುದು.

ಶ್ರೀ ಜಿ. ಪುಟ್ಟಸ್ವಾಮಿ ಗೌಡ : ಮಾನ್ಯ ಅಧ್ಯಕ್ಷರೇ, 26.09.91 ಲಿಖಿತ ರೂಪದಲ್ಲಿ ಉತ್ತರಿಸುವ 20ನೇ ಪಟ್ಟಿಯಲ್ಲಿ 54 ಪ್ರಶ್ನೆಗಳ ಪೈಕಿ 48 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದಿಡುತ್ತೇನೆ. ಹಾಗೂ 13ನೇ ದಿನಾಂಕದ 28ನೇ ಪಟ್ಟಿಯ 20 ಪ್ರಶ್ನೆಗಳ ಪೈಕಿ 20 ಪ್ರಶ್ನೆಗಳಿಗೂ ಉತ್ತರಗಳನ್ನು ಸಭೆಯ ಮುಂದೆ ಇಡುತ್ತೇನೆ.

ಕೊಡಗು ಜಿಲ್ಲೆಯ ಗಡಿ ಪ್ರದೇಶದ ಅಭಿವೃದ್ಧಿ ಯೋಜನೆ

2361 - ಶ್ರೀಮತಿ ಸುಮ ವಸಂತ (ವೀರಾಜಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಕೊಡಗು ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಲ್ಲಿ 1982ರಿಂದ ಇಲ್ಲಿಯವರೆಗೆ ಕೊಡಗು ಜಿಲ್ಲಾ ಪರಿಷತ್‌ನವರು ಪ್ರತಿ ವರ್ಷ ಎಷ್ಟು ಕಿ.ಮೀ. ಜಲ್ಲಿ ಹಾಕಿರುತ್ತಾರೆ ಹಾಗೂ ಎಷ್ಟು ಕಿ.ಮೀ. ಡಾಂಬರು ಹಾಕಲಾಗಿದೆ?

ಆ) ರೋಜಗಾರ್ ಯೋಜನೆಯ ಅಂಗವಾಗಿ ರಸ್ತೆಗಳನ್ನು ನಿರ್ಮಿಸಲು ಯಾವ ಯಾವ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ ಮತ್ತು ಎಷ್ಟು ಕಿ.ಮೀ. ಪ್ರತಿಯೊಂದು ಕ್ಷೇತ್ರದಲ್ಲಿ ಎಷ್ಟು ಉದ್ದದ ಜಲ್ಲಿ ರಸ್ತೆಯನ್ನು ನಿರ್ಮಿಸಲಾಗಿದೆ (ವಿವರವನ್ನು ಒದಗಿಸುವುದು)?

ಶ್ರೀ ಕೆ.ಹೆಚ್. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

ಅ) ಮಡಿಕೇರಿ ಜಿಲ್ಲಾ ಪರಿಷತ್ ಇಂಜಿನೀಯರಿಂಗ್ ವಿಭಾಗವು ದಿನಾಂಕ: 29-06-87 ರಿಂದ ಅಸ್ತಿತ್ವಕ್ಕೆ ಬಂದಿರುವ ಕಾರಣ, ಕೊಡಗು ಜಿಲ್ಲಾ ಪರಿಷತ್‌ನಿಂದ 1987-88 ರಿಂದ 1990-91 ರವರೆಗೆ ಒಟ್ಟು 254.72 ಕಿ.ಮೀ. ಉದ್ದದ ಜಲ್ಲಿ ರಸ್ತೆಯನ್ನು ಮತ್ತು 187.00 ಕಿ.ಮೀ. ಉದ್ದದ ಡಾಂಬರು ರಸ್ತೆಯನ್ನು ಮಾಡಲಾಗಿದೆ. ವಿವರವನ್ನು ತ:ಪ್ರ 1ರಲ್ಲಿ ಲಗತ್ತಿಸಿದೆ.

ಆ) ಜವಾಹರ್ ರೋಜಗಾರ್ ಯೋಜನೆಯಲ್ಲಿ ಈ ಕೆಳಗಿನಂತೆ ರಸ್ತೆಗಳನ್ನು ನಿರ್ಮಿಸಿ ವೆಚ್ಚ ಮಾಡಲಾಗಿದೆ.

ಕ್ಷೇತ್ರ	ಜಲ್ಲಿ ಹಾಕಿದ ರಸ್ತೆ ಉದ್ದ		ಖರ್ಚು	
ಮಡಿಕೇರಿ	6.522	ಕಿ.ಮೀ.	2.824	ಲಕ್ಷ
ಸೋಮವಾರಪೇಟೆ	7.392	ಕಿ.ಮೀ.	3.254	ಲಕ್ಷ
ವೀರಾಜಪೇಟೆ	5.448	ಕಿ.ಮೀ.	2.403	ಲಕ್ಷ
	19.362	ಕಿ.ಮೀ.	8.481	ಲಕ್ಷ

ವಿವರಗಳ ಬಗ್ಗೆ ತ:ಪ್ರ 2ರಲ್ಲಿ ಲಗತ್ತಿಸಿದೆ.